## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1285 (1344)** |
| ಸದಸ್ಯರ ಹೆಸರು | : | ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ವಿವರ |
|---|---|---|
| ಅ) | ಯಾದಗಿರಿ ಜಿಲ್ಲೆಯು ಪ್ರತಿ ವರ್ಷವೂ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ಯ ಫಲಿತಾಂಶದಲ್ಲಿ ಕೊನೆಯ ಸ್ಥಾನದಲ್ಲಿದೆಯೇ ಇರುತ್ತದೆ; ಇದಕ್ಕೆ ಕಾರಣಗಳೇನು; | ಯಾದಗಿರಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳ ಅನಿಯಮಿತ ಗೈರು ಹಾಜರಾತಿ, ಕೃಷಿ ಸಂಬಂಧಿತ ಚಟುವಟಿಕೆಗಳಲ್ಲಿ ಭಾಗವಹಿಸುವುದು ಮತ್ತು ಪಾಲಕರ / ಪೋಷಕರ ಅನಕ್ಷರತೆ ಮತ್ತು ವಲಸೆ ಕಾರಣಗಳಿಂದಾಗಿ ಕನಿಷ್ಠ ಫಲಿತಾಂಶವನ್ನು ಪಡೆಯುತ್ತಿದ್ದು, ಸರ್ಕಾರವು ಈಗಾಗಲೇ ಉತ್ತಮ ಫಲಿತಾಂಶಕ್ಕಾಗಿ ಹಲವಾರು ಪ್ರಗತಿಪರ ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ. |
| ಆ) | ಸದರಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿಯ ಫಲಿತಾಂಶಗಳ ಸುಧಾರಣೆಗಾಗಿ ಇದುವರೆವಿಗೂ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ವಿವರ ನೀಡುವುದು) | ಯಾದಗಿರಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಫಲಿತಾಂಶದ ಸುಧಾರಣೆಗಾಗಿ ಸರ್ಕಾರವು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಂಡಿದೆ.<br><br>**ಎಸ್.ಎಸ್.ಎಲ್.ಸಿ ಪರೀಕ್ಷೆ:**<br>1. ಶೈಕ್ಷಣಿಕ ವರ್ಷದ ಆರಂಭದಲ್ಲಿಯೇ ಅತಿಥಿ ಶಿಕ್ಷಕರ ಸೇವೆಯನ್ನು ಒದಗಿಸಲಾಗುತ್ತಿದೆ.<br>2. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗಾಗಿ ಮಿಷನ್-40 ಯೋಜನೆಯ ಕುರಿತು ಶಿಕ್ಷಕರಿಗೆ ತರಬೇತಿ ನೀಡಲಾಗುತ್ತಿದೆ.<br>3. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ವತಿಯಿಂದ ಪರಿಹಾರ ಬೋಧನೆ(Remedial Teaching) ಯಲ್ಲಿ ತೊಡಗಿರುವ ಮುಖ್ಯ ಶಿಕ್ಷಕರಿಗೆ ಮತ್ತು ಸಹ ಶಿಕ್ಷಕರಿಗೆ ಪ್ರೋತ್ಸಾಹಧನ ನೀಡಲು ಪರಿಶೀಲಿಸಲಾಗುತ್ತಿದೆ.<br>4. ಗ್ರಾಮೀಣ ಮಕ್ಕಳಿಗೆ ಸಾಯಂಕಾಲದ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದ್ದು, ಈ ತರಗತಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಪ್ರವಾಸ ಭತ್ಯೆ ನೀಡುವ ಬಗ್ಗೆಯೂ ಪರಿಶೀಲಿಸಲಾಗುತ್ತಿದೆ.<br>5. ಶೈಕ್ಷಣಿಕ ವರ್ಷದ ಆರಂಭದಿಂದಲೇ ಶಾಲಾ ಪೂರ್ವ ಮತ್ತು ಶಾಲಾ ನಂತರದ ಅವಧಿಯಲ್ಲಿ, ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ಬೋಧನೆ ಮಾಡಲಾಗುತ್ತಿದೆ.<br>6. Learning Based Assessment(LBA) ಆಧಾರಿತ ಪಠ್ಯ ಬೋಧನೆ ಹಾಗೂ ಮಾದರಿ ಪ್ರಶ್ನೆ ಪತ್ರಿಕೆಗಳ ಬಿಡುಗಡೆ, ಪ್ರಶ್ನೆ ಪತ್ರಿಕೆಗಳ ನೀಲ ನಕ್ಷೆಗಳನ್ನು ಬಿಡುಗಡೆ ಮಾಡಲಾಗುತ್ತಿದೆ.<br>**ದ್ವಿತೀಯ ಪಿ.ಯು.ಸಿ ಪರೀಕ್ಷೆ:**<br>1. ಪ್ರತಿ ವಿಷಯದ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಮತ್ತು ಪ್ರಶ್ನೆಕೋಠಿಯನ್ನು(Question Bank) ಅಂಕವಾರು ಸಿದ್ಧಪಡಿಸಿ ಇಲಾಖಾ ಜಾಲತಾಣದಲ್ಲಿ ಅಳವಡಿಸಲಾಗಿದೆ. |

| | | |
|---|---|---|
| | | 2. ಕಿರು ಪರೀಕ್ಷೆ ಹಾಗೂ ಮಧ್ಯವಾರ್ಷಿಕ ಪರೀಕ್ಷೆಗಳನ್ನು ವಿದ್ಯಾರ್ಥಿಗಳು ಗಂಭೀರವಾಗಿ ಪರಿಗಣಿಸಲು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದೆ.<br>3. ಈ ಮೇಲಿನ ಪರೀಕ್ಷೆಗಳನ್ನು ನಡೆಸಿ ಮೌಲ್ಯಮಾಪನದ ನಂತರ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಗುರುತಿಸಿ ಅಂತಹ ವಿದ್ಯಾರ್ಥಿಗಳಿಗೆ ಪರಿಣಾಮಕಾರಿ ಬೋಧನಾ ತರಗತಿಗಳನ್ನು ನಡೆಸುವುದು.<br>4. ನಿಯಮಿತವಾಗಿ ಪಾಲಕರ ಸಭೆ ನಡೆಸಿ ವಿದ್ಯಾರ್ಥಿಗಳ ಹಾಜರಾತಿ ಹಾಗೂ ಕಲಿಕಾ ಪ್ರಗತಿ ಬಗ್ಗೆ ಮಾಹಿತಿ ನೀಡಿ, ಅವರಿಂದಲೂ ಸಹಕಾರ ಮತ್ತು ವಿದ್ಯಾರ್ಥಿಗಳ ಸಹಕಾರ ನೀಡಲು ತಿಳಿಸುವುದು.<br>5. ಜಿಲ್ಲಾ ಹಂತದಲ್ಲಿ ಆಯಾ ವಿಷಯಗಳ ಉಪನ್ಯಾಸಕರ ವೇದಿಕೆಯಿಂದ ಉಪನ್ಯಾಸಕರಿಗೆ ಕಾರ್ಯಗಾರ ನಡೆಸಿ ಸೂಕ್ತ ಪ್ರೇರೇಪಣೆ ನೀಡುವುದು.<br>6. ಪ್ರತಿದಿನ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದು, ಆ ತರಗತಿಗಳಲ್ಲಿ 01 ಮತ್ತು 02 ಅಂಕದ ಹಾಗೂ 05 ಅಂಕದ ಪ್ರಶ್ನೆಗಳಿಗೆ ಉತ್ತರಿಸುವ ವಿಧಾನಗಳನ್ನು ತಿಳಿಸಿಕೊಡುವುದು.<br>7. ವಿಷಯವಾರು ಘಟಕ ಪರೀಕ್ಷೆಗಳನ್ನು ನಡೆಸಿ, ಘಟಕವಾರು ಪುನರ್ ಮನನ ತರಗತಿಗಳನ್ನು ನಡೆಸುವುದು.<br>8. ಗುಂಪು ಅಧ್ಯಯನಕ್ಕೆ ಪ್ರೇರೇಪಿಸುವುದು.<br>9. ವಿದ್ಯಾರ್ಥಿಗಳ ಗುಂಪು ರಚಿಸಿ ಪ್ರತಿ ಉಪನ್ಯಾಸಕರಿಗೆ ದತ್ತು ಪಡೆಯಲು ಕ್ರಮ ತೆಗೆದುಕೊಳ್ಳುವುದು.<br>10. ಎಲ್ಲಾ ವಿಷಯಗಳ ಅಭ್ಯಾಸ ಪತ್ರಿಕೆಗಳನ್ನು ಸಿದ್ಧಪಡಿಸಿ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಮನದಟ್ಟು ಮಾಡುವುದು.<br>11. ಹಿಂದುಳಿದ ವಿದ್ಯಾರ್ಥಿಗಳಿಗೆ ಪರಿಹಾರ ಬೋಧನ(Remedial Teaching) ತರಗತಿಗಳನ್ನು ನಡೆಸುವುದು.<br>12. ಕಳೆದ ಸಾಲಿನಲ್ಲಿ ಫಲಿತಾಂಶ ಕಡಿಮೆ ಇರುವ ಜಿಲ್ಲೆಗಳಿಗೆ ಕೇಂದ್ರದ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ಫಲಿತಾಂಶ ಉತ್ತಮಪಡಿಸಲು ಅಗತ್ಯಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ. |
| ಇ) | ಯಾದಗಿರಿ ಜಿಲ್ಲೆಯಲ್ಲಿ ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ? | ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 06 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. |

**ಸಂಖ್ಯೆ: ಇಪಿ 78 ಎಸ್‌ಇಎಸ್ 2026**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು